ಕರ್ನಾಟಕ ಸರ್ಕಾರ

(ಸಿ.ಆರ್.ಪಿ.67)

ಹೇಳಿಕೆ ಹಾಳೆ
(ಆರ್.ಪಿ.ಸಂಖ್ಯೆ 57)
ನಮೂನೆ ಸಂಖ್ಯೆ 4

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ಹಾಗೂ ಸ್ಪೆಷಲ್ ನ್ಯಾಯಾಧೀಶರ ನ್ಯಾಯಾಲಯ,**

**ಹಾಸನ**

**ಸ್ಪೆಷಲ್ ಕೇಸ್ ನಂಬರ್ :: 140/2015**

ಪ್ರಾಸಾ- 18 ಚಾಸಾ- 24

| | | |
|---|---|---|
| ಸಾಕ್ಷಿದಾರರ ಹೆಸರುಃ | : | ಎನ್.ಚೈತನ್ಯ |
| ತಂದೆಯ ಹೆಸರುಃ | : | ಕೆ.ಆರ್.ನಾರಾಯಣಶೆಟ್ಟಿ |
| ವಯಸ್ಸುಃ | : | 51 ವರ್ಷ |
| ಉದ್ಯೋಗಃ | : | ಸಿ.ಇ.ಒ., ಕುರುಹಿನಶೆಟ್ಟಿ ಸೌಹಾರ್ದ ಕ್ರೆಡಿಟ್ ಕೋಆಪರೇಟಿವ್ ಸೊಸೈಟಿ ಲಿಮಿಟೆಡ್, ಬೆಂಗಳೂರು |
| ವಾಸಃ | : | ಬೆಂಗಳೂರು |

**ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಿದ ದಿನಾಂಕಃ 19-01-2024**
**ಮುಖ್ಯ ವಿಚಾರಣೆಃ ಸರ್ಕಾರದ ಪರವಾಗಿ ಮಾನ್ಯ ವಿಶೇಷ ಅಭಿಯೋಜಕರಿಂದಃ**

ನಾನು ಮೇ 2012 ರಿಂದ ಏಪ್ರಿಲ್ 2015 ರ ತನಕ ಹಾಸನದ ಆ್ಯಕ್ಸಿಸ್ ಬ್ಯಾಂಕ್ ಶಾಖೆಯಲ್ಲಿ ಬ್ರ್ಯಾಂಚ್ ಹೆಡ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೆ.

2. ಈ ಕೇಸಿಗೆ ಸಂಬಂಧಪಟ್ಟಂತೆ ಕರ್ನಾಟಕ ಲೋಕಾಯುಕ್ತ ಪೊಲೀಸರು, 07.06.2014 ರಂದು ನಮ್ಮ ಬ್ಯಾಂಕಿಗೆ ಒಂದು ಪತ್ರ ಬರೆದು, ಸಿ.ಆರ್.ಮಂಜುನಾಥ್ ರವರ ಪತ್ನಿ ಎಸ್.ಪಿ. ಪದ್ಮಾವತಿ ರವರಿಗೆ ಸಂಬಂಧಪಟ್ಟ ನಿಶ್ಚಿತ ಠೇವಣಿಯ ಬಗ್ಗೆ ಮಾಹಿತಿ ಕೋರಿರುತ್ತಾರೆ. ಈಗ ತೋರಿಸಿದ ದಾಖಲೆಯು ಸದರಿ ಪತ್ರ ಆಗಿದ್ದು, ಅದನ್ನು ನಮ್ಮ ಕಛೇರಿಯಲ್ಲಿ ಪಡೆದುಕೊಂಡಿರುತ್ತಾರೆ. ಸದರಿ ಪತ್ರವನ್ನು ನಿಶಾನೆ ಪಿ.104 ಎಂದು

ಗುರುತಿಸಲಾಗಿದೆ. ಸದರಿ ಕೋರಿಕೆಯ ಮೇರೆಗೆ ನಾನು ದಿನಾಂಕ 13.06.2014 ರಂದು ಈ ಮೇಲೆ ಹೇಳಿರುವ ನಿಶ್ಚಿತ ಠೇವಣಿಯ ಮಾಹಿತಿಯನ್ನು ಹಾಸನ ಲೋಕಾಯುಕ್ತ ಪೊಲೀಸರಿಗೆ ನೀಡಿರುತ್ತೇನೆ. ಈಗ ತೋರಿಸಿದ ದಾಖಲೆ ಸದರಿ ನನ್ನ ಪತ್ರ ಆಗಿದ್ದು ಅದನ್ನು ನಿಶಾನೆ ಪಿ.105 ಎಂದು ಮತ್ತು ಅದರಲ್ಲಿರುವ ನನ್ನ ಸಹಿಯನ್ನು ನಿಶಾನೆ ಪಿ.105(ಎ) ಎಂದು ಗುರುತಿಸಲಾಗಿದೆ.

**<u>ಪಾಟೀ ಸವಾಲುಃ- ಆರೋಪಿ ಪರ ಶ್ರೀ ಸಿ.ಎನ್.ವಿ. ವಕೀಲರಿಂದಃ-</u>**

ಈ ಮೇಲೆ ಹೇಳಿರುವ ಠೇವಣಿಯ ಬಗ್ಗೆ ನಾನು ಸರಿಯಾಗಿ ಪರಿಶೀಲನೆ ಮಾಡದೆ ಲೋಕಾಯುಕ್ತ ಪೊಲೀಸರ ಕೋರಿಕೆ ಮೇರೆಗೆ ನಾನು ಅವರಿಗೆ ಮಾಹಿತಿ ನೀಡಿದ್ದು ಎಂದರೆ ಸರಿಯಲ್ಲ. ನಮ್ಮ ಬ್ಯಾಂಕ್ ನ ದಾಖಲೆಗಳ ಆಧಾರದಲ್ಲಿ ನಾನು ಲೋಕಾಯುಕ್ತ ಪೊಲೀಸರಿಗೆ ಮಾಹಿತಿ ನೀಡಿರುತ್ತೇನೆ.

**<u>ಮರು ವಿಚಾರಣೆಃ</u>** ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ.ಸ.ಇದೆ.**

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ಹಾಗೂ**
**ಸ್ಪೆಷಲ್ ನ್ಯಾಯಾಧೀಶರು, ಹಾಸನ.**